# 13. ಬೆಳಕು: ಪ್ರತಿಫಲನ ಮತ್ತು ವಕ್ರೀಭವನ

**1. ಬೆಳಕಿನ ಪ್ರತಿಫಲನ ಎಂದರೇನು?**

ನಯವಾದ ಮೇಲ್ಮೈ ಮೇಲೆ ಬಿದ್ದ ಬೇಳಕು ಪುನಃ ತಿರುಗಿ ಬರುವುದನ್ನು ಬೆಳಕಿನ ಪ್ರತಿಫಲನ ಎನ್ನುತ್ತೇವೆ.

**2. ಬೆಳಕಿನ ಪ್ರತಿಫಲನದ ನಿಯಮಗಳನ್ನು ತಿಳಿಸಿ.**

**ಒಂದನೇ ನಿಯಮ:** ಪತನಕೋನವು ಪ್ರತಿಫಲನ ಕೋನಕ್ಕೆ ಸಮವಾಗಿರುತ್ತದೆ.

**ಎಡನೇ ನಿಯಮ:** ಪತನಕಿರಣ, ಪ್ರತಿಫಲನ ಕಿರಣ ಹಾಗೂ ಪತನಬಿಂದುವಿನಲ್ಲಿ ಪ್ರತಿಫಲನದ ಮೇಲ್ಮೈ ಮೇಲೆ ಎಳೆದ ಲಂಬ, ಈ ಮೂರೂ ಒಂದೇ ಸಮತಲದಲ್ಲಿರುತ್ತವೆ.

**3. ಸಮತಲ ದರ್ಪಣದಲ್ಲಿ ಉಂಟಾಗುವ ಪ್ರತಿಬಿಂಬದ ಲಕ್ಷಣಗಳೇನು?**

- ಸಮತಲ ದರ್ಪಣದಲ್ಲಿ ಉಂಟಾದ ಪ್ರತಿಬಿಂಬವು ಯಾವಾಗಲೂ ಮಿಥ್ಯ ಮತ್ತು ನೇರವಾಗಿರುತ್ತದೆ.
- ಪ್ರತಿಬಿಂಬದ ಗಾತ್ರವು ವಸ್ತುವಿನ ಗಾತ್ರಕ್ಕೆ ಸಮನಾಗಿರುತ್ತದೆ.
- ವಸ್ತುವು ದರ್ಪಣದ ಮುಂದೆ ಎಷ್ಟು ದೂರದಲ್ಲಿದೆಯೋ, ಅಷ್ಟೇ ದೂರದಲ್ಲಿ ದರ್ಪಣದ ಹಿಂದೆ ಪ್ರತಿಬಿಂಬವು ಉಂಟಾಗುತ್ತದೆ.
- ಪ್ರತಿಬಿಂಬವು ಪಾರ್ಶ್ವಪಲ್ಲಟ ಹೊಂದಿರುತ್ತದೆ.




**4. ಗೋಳೀಯ ದರ್ಪಣಗಳು ಎಂದರೇನು? ಅದರ ವಿಧಗಳನ್ನು ತಿಳಿಸಿ.**

ವಕ್ರ ಮೇಲ್ಮೈ ಹೊಂದಿರುವ ದರ್ಪಣಗಳು ಗೋಳೀಯ ದರ್ಪಣಗಳು.

ಪ್ರತಿಫಲಿಸುವ ವಕ್ರ ಮೇಲ್ಮೈ ಉಬ್ಬಾಗಿದ್ದರೆ/ಹೊರಮುಖವಾಗಿ ಬಾಗಿದ್ದರೆ ಅದನ್ನು ಪೀನ(convex) ದರ್ಪಣವೆಂದೂ ಹಾಗೂ ಪ್ರತಿಫಲಿಸುವ ವಕ್ರ ಮೇಲ್ಮೈ ಗೋಳದ ಕೇಂದ್ರದ ಕಡೆಗೆ ಮುಖಮಾಡಿದ್ದರೆ/ತಗ್ಗಾಗಿದ್ದರೆ ಅದನ್ನು ನಿಮ್ನ(concave) ದರ್ಪಣವೆಂದೂ ಕರೆಯಲಾಗಿದೆ.

**5. ನಿಮ್ನ ದರ್ಪಣದ ಉಪಯೋಗಗಳನ್ನು ಪಟ್ಟಿಮಾಡಿ.**

- ಟಾರ್ಚ್‌ಗಳಲ್ಲಿ, ಸರ್ಚ್‌ಲೈಟ್‌ಗಳಲ್ಲಿ, ವಾಹನದ ಮುಂಭಾಗದ ದೀಪಗಳಲ್ಲಿ ಬೆಳಕಿನ ಶಕ್ತಿಶಾಲಿ ಸಮಾಂತರ ಕಿರಣ ಪುಂಜವನ್ನು ಪಡೆಯಲು ಬಳಸುವರು.
- ಹಲ್ಲುಗಳಲ್ಲಿನ ಕುಳಿಗಳನ್ನು ಪರೀಕ್ಷಿಸಲು ವೈದ್ಯರು ನಿಮ್ನ ದರ್ಪಣ ಬಳಸುವರು.
- ಕ್ಷೌರಿಕನ ಅಂಗಡಿಯಲ್ಲಿ ಮುಖದ ದೊಡ್ಡ ಪ್ರತಿಬಿಂಬ ಪಡೆಯಲು ಬಳಸುವರು.
- ಸೌರಕುಲುಮೆಗಳಲ್ಲಿ ಸೂರ್ಯನ ಕಿರಣಗಳನ್ನು ಕೇಂದ್ರೀಕರಿಸಲು ದೊಡ್ಡ ನಿಮ್ನ ದರ್ಪಣಗಳನ್ನು ಬಳಸುವರು.

**6. ವಸ್ತುವಿನ ನೇರ ಮತ್ತು ದೊಡ್ಡದಾದ ಪ್ರತಿಬಿಂಬವನ್ನು ಪಡೆಯಲು ಬಳಸುವ ದರ್ಪಣವನ್ನು ಹೆಸರಿಸಿ.** ನಿಮ್ನ ದರ್ಪಣ.

**7. ದರ್ಪಣ ಅಥವಾ ಮಸೂರಕ್ಕೆ ಸಂಬಂಧಿಸಿದಂತೆ ಈ ಕೆಳಗಿನ ಸಂಕೇತಾಕ್ಷರಗಳನ್ನು ಪರಿಚಯಿಸಿಕೊಳ್ಳಿ.**

| **ಸಂಕೇತಾಕ್ಷರ** | **ಹೆಸರು** | **ಅರ್ಥ** |
|---|---|---|
| **P** | ದರ್ಪಣದ ಧ್ರುವ | ಗೋಲಾಕಾರದ ಪ್ರತಿಫಲಿಸುವ ಮೇಲ್ಮೈ |
| **C** | ವಕ್ರತಾ ಕೇಂದ್ರ | ದರ್ಪಣದ ಕೇಂದ್ರಬಿಂದು |
| **R** | ವಕ್ರತಾ ತ್ರಿಜ್ಯ | ಗೋಳೀಯ ದರ್ಪಣದ ಪ್ರತಿಫಲಿಸುವ ಭಾಗವನ್ನು ಹೊಂದಿರುವ ಗೋಳದ ತ್ರಿಜ್ಯ |
| **F** | ಸಂಗಮ ಬಿಂದು (ಪ್ರಧಾನ ಸಂಗಮ) | ಪ್ರತಿಫಲಿತ ಕಿರಣಗಳು ಪ್ರಧಾನಾಕ್ಷದ ಮೇಲೆ ಕೇಂದ್ರೀಕೃತವಾಗುವ ಬಿಂದು |

| | | |
|---|---|---|
| **f** | ಸಂಗಮ ದೂರ | ಗೋಳೀಯ ದರ್ಪಣದ ಧ್ರುವ ಮತ್ತು ಸಂಗಮ ಬಿಂದುಗಳ ನಡುವಿನ ಅಂತರ |
| **MN** | ದ್ಯುತಿರಂಧ್ರ | ಗೋಳೀಯ ದರ್ಪಣದ ಪ್ರತಿಫಲಿಸುವ ಮೇಲ್ಮೈನ ವ್ಯಾಸ |
| | ಪ್ರಧಾನಾಕ್ಷ | ಗೋಳೀಯ ದರ್ಪಣದ ವಕ್ರತಾ ಕೇಂದ್ರ ಮತ್ತು ಧ್ರುವದ ಮೂಲಕ ಹಾದು ಹೋಗುವ ಸರಳರೇಖೆ |

**8. ವಸ್ತುವಿನ ಸ್ಥಾನ ಬೇರೆ ಬೇರೆ ಅಂತರದಲಿದ್ದಾಗ ನಿಮ್ನ ದರ್ಪಣದಲ್ಲಿ ಪ್ರತಿಬಿಂಬದ ಸ್ಥಾನ, ಗಾತ್ರ ಮತ್ತು ಪ್ರತಿಬಿಂಬದ ಸ್ವಭಾವವನ್ನು ಚರ್ಚಿಸಿ.**

| ವಸ್ತುವಿನ ಸ್ಥಾನ | ಪ್ರತಿಬಿಂಬದ ಸ್ಥಾನ | ಪ್ರತಿಬಿಂಬದ ಗಾತ್ರ | ಪ್ರತಿಬಿಂಬದ ಸ್ವಭಾವ |
|---|---|---|---|
| ಅನಂತದಲ್ಲಿ | ಸಂಗಮ ಬಿಂದು F | ಅತ್ಯಂತ ಚಿಕ್ಕದಾದ, ಚುಕ್ಕೆ | ಸತ್ಯ ಮತ್ತು ತಲೆಕೆಳಗಾದ |
| C ಯಿಂದ | F ಮತ್ತು C ಯ | ಚಿಕ್ಕದು | ಸತ್ಯ ಮತ್ತು ತಲೆಕೆಳಗಾದ |
| C ಯಲ್ಲಿ | C ಯಲ್ಲಿ | ಅದೇ ಗಾತ್ರ | ಸತ್ಯ ಮತ್ತು ತಲೆಕೆಳಗಾದ |
| C ಮತ್ತು F | C ಯಿಂದ ದೂರದಲ್ಲಿ | ದೊಡ್ಡದಾದ | ಸತ್ಯ ಮತ್ತು ತಲೆಕೆಳಗಾದ |
| F ನಲ್ಲಿ | ಅನಂತದೂರದಲ್ಲಿ | ಅತ್ಯಂತ ದೊಡ್ಡದಾದ | ಸತ್ಯ ಮತ್ತು ತಲೆಕೆಳಗಾದ |
| P ಮತು F ನಡುವೆ | ದರ್ಪಣದ ಹಿಂದೆ | ದೊಡ್ಡದಾದ (ವರ್ಧಿಸಿದ) | ಮಿಥ್ಯ ಮತ್ತು ನೇರವಾದ |

**9. ವಸ್ತುವಿನ ಸ್ಥಾನ ಬೇರೆ ಬೇರೆ ಅಂತರದಲ್ಲಿದ್ದಾಗ ಪೀನ ದರ್ಪಣದಲ್ಲಿ ಪ್ರತಿಬಿಂಬದ ಸ್ಥಾನ, ಗಾತ್ರ ಮತ್ತು ಪ್ರತಿಬಿಂಬದ ಸ್ವಭಾವವನ್ನು ಚರ್ಚಿಸಿ.**

| ವಸ್ತುವಿನ ಸ್ಥಾನ | ಪ್ರತಿಬಿಂಬದ ಸ್ಥಾನ | ಪ್ರತಿಬಿಂಬದ ಗಾತ್ರ | ಪ್ರತಿಬಿಂಬದ |
|---|---|---|---|
| ಅನಂತದಲ್ಲಿರುವಾಗ | ಸಂಗಮ ಬಿಂದು Fನಲ್ಲಿ, ದರ್ಪಣದ ಹಿಂಬಾಗದಲ್ಲಿ | ಅತ್ಯಂತ ಚಿಕ್ಕದಾದ, ಚುಕ್ಕೆಯ ಗಾತ್ರದಷ್ಟು | ಮಿಥ್ಯ ಮತ್ತು ನೇರ |
| ಅನಂತ ಮತ್ತು ದರ್ಪಣದ ಧ್ರುವ | P ಮತ್ತು F ನಡುವೆ, ದರ್ಪಣದ ಹಿಂಬಾಗದಲಿ | ಚಿಕ್ಕದಾದ | ಮಿಥ್ಯ ಮತ್ತು ನೇರ |

**10. ನಾವು ವಾಹನದ ಹಿನ್ನೋಟ ದರ್ಪಣವಾಗಿ ಬಳಸಲು ಪೀನದರ್ಪಣಕ್ಕೆ ಆದ್ಯತೆಯನ್ನು ನೀಡುತ್ತೇವೆ. ಏಕೆ?**

- ಈ ದರ್ಪಣಗಳನ್ನು ವಾಹನದ ಪಾರ್ಶ್ವಗಳಲ್ಲಿ, ವಾಹನ ಚಾಲಕನು ಹಿಂಬದಿಯಲ್ಲಿ ಬರುತ್ತಿರುವ ವಾಹನಗಳನ್ನು ವೀಕ್ಷಿಸಿ ಸುರಕ್ಷಿತ ಚಾಲನೆಗೆ ಅನುಕೂಲವಾಗುವಂತೆ ಜೋಡಿಸಿರುತ್ತಾರೆ.
- ಯಾವಾಗಲೂ ಚಿಕ್ಕದಾದ ಮತ್ತು ನೇರ ಪ್ರತಿಬಿಂಬಗಳನ್ನೇ ಉಂಟುಮಾಡುವ ಪೀನ ದರ್ಪಣಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡುತ್ತಾರೆ.
- ಪೀನ ದರ್ಪಣಗಳು ಹೊರಅಂಚಿನ ಕಡೆಗೆ ವಕ್ರತೆಯನ್ನು ಹೊಂದಿರುವುದರಿಂದ ಇವುಗಳ ದೃಷ್ಟಿ ಕ್ಷೇತ್ರವು ಬಹಳ ಅಧಿಕವಾಗಿರುತ್ತದೆ.
- ಸಮತಲ ದರ್ಪಣಕ್ಕೆ ಹೋಲಿಸಿದರೆ ಪೀನ ದರ್ಪಣಗಳು ಚಾಲಕರಿಗೆ ಅವರ ಹಿಂಭಾಗದ ಹೆಚ್ಚಿನ ಕ್ಷೇತ್ರವನ್ನು ವೀಕ್ಷಿಸಲು ಸಹಾಯಕವಾಗಿವೆ.

**11. ಗೋಳೀಯ ದರ್ಪಣಗಳ ಪ್ರತಿಫಲನದ ಸಾಂಪ್ರಾದಾಯಿಕ (ಕಾರ್ಟೀಸಿಯನ್) ಸಂಕೇತಗಳನ್ನು ತಿಳಿಸಿ.**

1. ವಸ್ತುವನ್ನು ಯಾವಾಗಲೂ ದರ್ಪಣದ ಎಡಭಾಗದಲ್ಲಿ ಇಡಲಾಗುತ್ತದೆ. ಇದು ವಸ್ತುವಿನಿಂದ ದರ್ಪಣದ ಮೇಲೆ ಬೀಳುವ ಬೆಳಕು ಎಡಗಡೆಯಿಂದ ಬೀಳುತ್ತದೆ ಎಂದು ಸೂಚಿಸುತ್ತದೆ.
2. ಪ್ರಧಾನ ಅಕ್ಷಕ್ಕೆ ಸಮಾಂತರವಾಗಿರುವ ಎಲ್ಲಾ ದೂರಗಳನ್ನು ದರ್ಪಣದ ಧ್ರುವದಿಂದ ಅಳೆಯಲಾಗುತ್ತದೆ.
3. ಮೂಲ ಬಿಂದುವಿನ ಬಲಭಾಗದಲ್ಲಿ (+X- ಅಕ್ಷದ ಉದ್ದಕ್ಕೂ) ಅಳೆಯಲಾದ ಎಲ್ಲ ದೂರಗಳನ್ನು ಧನಾತ್ಮಕವಾಗಿ, ಹಾಗೆಯೇ

ಮೂಲ ಬಿಂದುವಿನ ಎಡಭಾಗದಲ್ಲಿ (– X - ಅಕ್ಷದ ಉದ್ದಕ್ಕೂ) ಅಳೆಯಲಾದ ಎಲ್ಲ ದೂರಗಳನ್ನು ಋಣಾತ್ಮಕವಾಗಿ ತೆಗೆದುಕೊಳ್ಳಲಾಗುತ್ತದೆ.

4. ಪ್ರಧಾನ ಅಕ್ಷಕ್ಕೆ ಲಂಬವಾಗಿ ಅಥವಾ ಮೇಲಿನ ಕಡೆಗೆ (+Y- ಅಕ್ಷದ ಉದ್ದಕ್ಕೂ) ಅಳೆಯಲಾಗುವ ದೂರಗಳನ್ನು ಧನಾತ್ಮಕವಾಗಿ ತೆಗೆದುಕೊಳ್ಳಲಾಗುತ್ತದೆ.

5. ಪ್ರಧಾನ ಅಕ್ಷಕ್ಕೆ ಲಂಬವಾಗಿ ಅಥವಾ ಕೆಳಗಿನ ಬದಿಯ ಕಡೆಗೆ (–Y- ಅಕ್ಷದ ಉದ್ದಕ್ಕೂ) ಅಳೆಯಲಾಗುವ ದೂರಗಳನ್ನು ಋಣಾತ್ಮಕವಾಗಿ ತೆಗೆದುಕೊಳ್ಳಲಾಗುತ್ತದೆ.

**12. ಬೆಳಕಿನ ವಕ್ರೀಭವನ ಎಂದರೇನು?**

ಬೆಳಕು ಸಾಂದ್ರ ಮಾಧ್ಯಮದಿಂದ ವಿರಳ ಮಾಧ್ಯಮ ಹಾಗೂ ವಿರಳ ಮಾಧ್ಯಮದಿಂದ ಸಾಂದ್ರ ಮಾಧ್ಯಮಕ್ಕೆ ಪ್ರಸರಣವಾಗುವಾಗ, ತನ್ನ ಪ್ರಸರಣದಿಕ್ಕನ್ನು ಸ್ವಲ್ಪ ಪ್ರಮಾಣದಲ್ಲಿ ಬದಲಿಸುತ್ತದೆ. ಇದನ್ನು ಬೆಳಕಿನ ವಕ್ರೀಭವನ ಎನ್ನುವರು.

**13. ಮಸೂರಗಳ ಎರಡು ವಿಧಗಳನ್ನು ತಿಳಿಸಿ.**



ವಕ್ರಮೇಲ್ಮೈಯನ್ನು ಹೊಂದಿರುವ ಪಾರದರ್ಶಕ ವಸ್ತುವನ್ನು ಮಸೂರ ಎನ್ನುವರು.
ಮಸೂರಗಳಲ್ಲಿ ಎರಡು ವಿಧ.
ಉಬ್ಬಾದ ವಕ್ರಮೇಲ್ಮೈ ಹೊಂದಿರುವ ಮಸೂರ ಪೀನ ಮಸೂರ. ಇದು ಬೆಳಕಿನ ಕಿರಣಗಳನ್ನು ಕೇಂದ್ರೀಕರಿಸುತ್ತದೆ.
ತಗ್ಗಾದ ವಕ್ರ ಮೇಲ್ಮೈ ಹೊಂದಿರುವ ಮಸೂರ ನಿಮ್ನ ಮಸೂರ. ಇದು ಬೆಳಕಿನ ಕಿರಣಗಳನ್ನು ವಿಕೇಂದ್ರೀಕರಿಸುತ್ತದೆ

**14. ವಕ್ರೀಭವನ ಸೂಚ್ಯಂಕ ಎಂದರೇನು?**

ಬೆಳಕು ಒಂದು ಮಾಧ್ಯಮದಿಂದ ಮತ್ತೊಂದು ಮಾಧ್ಯಮಕ್ಕೆ ಪ್ರಸರಣವಾಗುವಾಗ ದಿಕ್ಕಿನ ಬದಲಾವಣೆಯಲ್ಲಿ ಉಂಟಾದ ಪ್ರಮಾಣವನ್ನು ವಕ್ರೀಭವನ ಸೂಚ್ಯಂಕ ಎನ್ನುವರು.

**15. ವಿವಿಧ ವಸ್ತುಗಳಲ್ಲಿ ವಕ್ರೀಭವನ ಸೂಚ್ಯಂಕವನ್ನು ತಿಳಿಸಿ.**

| ದ್ರವ್ಯ ಮಾಧ್ಯಮ | ವಕ್ರೀಭವನ ಸೂಚ್ಯಂಕ | ದ್ರವ್ಯ ಮಾಧ್ಯಮ | ವಕ್ರೀಭವನ ಸೂಚ್ಯಂಕ |
|---|---|---|---|
| ಗಾಳಿ | 1.0003 | ಕ್ರೌನ್ ಗಾಜು | 1.52 |
| ಮಂಜುಗಡ್ಡೆ | 1.31 | ಕೆನಡಾ ಬಾಲ್ಸಮ್ | 1.53 |
| ನೀರು | 1.33 | ಕಲ್ಲುಪ್ಪು(Rock salt) | 1.54 |
| ಆಲ್ಕೋಹಾಲ್ | 1.36 | ಇಂಗಾಲದ ಡೈಸಲ್ಫೈಡ್ | 1.63 |
| ಸೀಮೆ ಎಣ್ಣೆ | 1.44 | ಸಾಂದ್ರ ಫ್ಲಿಂಟ್ ಗಾಜು | 1.65 |
| ಸಂಯೋಜಿಸಿದ ಸ್ಫಟಿಕ ಶಿಲೆ (fused | 1.46 | ಮಾಣಿಕ್ಯ (Ruby) | 1.71 |
| ಟರ್ಪೆಂಟೈನ್ ಆಯಿಲ್ | 1.47 | ನೀಲಮಣಿ | 1.77 |
| ಬೆಂಜೀನ್ | 1.50 | ವಜ್ರ | 2.42 |

**16. ಗಾಳಿಯಲ್ಲಿ ಚಲಿಸುತ್ತಿರುವ ಬೆಳಕಿನ ಒಂದು ಕಿರಣವು ಓರೆಯಾಗಿ ನೀರನ್ನು ಪ್ರವೇಶಿಸುತ್ತದೆ. ಬೆಳಕಿನ ಕಿರಣವು ಲಂಬದ ಕಡೆಗೆ ಬಾಗುವುದೊ ಅಥವಾ ಲಂಬದಿಂದ ದೂರ ಬಾಗುವುದೋ? ಏಕೆ?**

ಬೆಳಕಿನ ಕಿರಣವು ಲಂಬದ ಕಡೆಗೆ ಬಾಗುವುದು. ಏಕೆಂದರೆ, ಬೆಳಕಿನ ವೇಗ ಗಾಳಿ ಮಾಧ್ಯಮದಿಂದ ನೀರಿನ ಮಾಧ್ಯಮಕ್ಕೆ ಪ್ರವೇಶಿಸಿದಾಗ ಕಡಿಮೆಯಾಗುತ್ತದೆ.

(ನೀರಿನಲ್ಲಿ ಕಣಗಳು ಗಾಳಿಯಲ್ಲಿನ ಕಣಗಳ ಜೋಡಣೆಗಿಂತ ಸ್ವಲ್ಪ ಒತ್ತೊತ್ತಾಗಿರುತ್ತವೆ. ಇದರಿಂದ ಕಣಗಳು ಬೆಳಕಿನ ವೇಗಕ್ಕೆ ತಡೆಯನ್ನೊಡ್ಡುತ್ತವೆ.)

**17. ವಕ್ರೀಭವನ ಸೂಚ್ಯಂಕವು 2.42 ಇದೆ. ಈ ಹೇಳಿಕೆಯ ಅರ್ಥವೇನು?**

2.42 ವಜ್ರದ ವಕ್ರೀಭವನ ಸೂಚ್ಯಂಕವಾಗಿದೆ. ಇದರರ್ಥ ಬೆಳಕಿನ ವೇಗವು ವಜ್ರದಲ್ಲಿ ಗಾಳಿ/ನಿರ್ವಾತಕ್ಕಿಂತ 2.42 ರಷ್ಟು ಕಡಿಮೆ ಇದೆ ಎಂದರ್ಥ.

**18. ಮಸೂರ ಸಾಮರ್ಥ್ಯದ 1 ಡಯಾಪ್ಟರ್ ಅನ್ನು ವ್ಯಾಖ್ಯಾನಿಸಿ.**
ಡಯಾಪ್ಟರ್ ಎನ್ನುವುದು ಮಸೂರ ಸಾಮರ್ಥ್ಯದ ಅಂತರಾಷ್ಟ್ರೀಯ ಏಕಮಾನವಾಗಿದೆ.
1 ಡಯಾಪ್ಟರ್ ಎಂದರೆ ಮಸೂರದ ಸಾಮರ್ಥ್ಯ 1 ಮೀಟರ್ ಸಂಗಮದೂರವಿದೆ ಎಂದರ್ಥ.

**19. ಮಸೂರದ ಸಾಮರ್ಥ್ಯವನ್ನು ಹೇಗೆ ನಿರ್ಧರಿಸುವಿರಿ?**

ಮಸೂರದ ಸಾಮರ್ಥ್ಯವು ಅದರ ಸಂಗಮದೂರಕ್ಕೆ ವಿಲೋಮಾನುಪತದಲ್ಲಿರುತ್ತದೆ. $p = \frac{1}{\mathrm{f}}$

**20. ದೃಷ್ಟಿಮಾಪನಗಾರನು ಸರಿಪಡಿಸುವ ಮಸೂರಗಳನ್ನು ಸೂಚಿಸುವಾಗ ಧನ ಮತ್ತು ಋಣ ಚಿಹ್ನೆಯಿಂದ ಸಾಮರ್ಥ್ಯ ಸಂಖ್ಯೆಯನ್ನು ತಿಳಿಸಿದರೆ, ಚಿಹ್ನೆಗಳು ಏನನ್ನು ಸೂಚಿಸುತ್ತವೆ?**
ಮಸೂರದ ಸಾಮರ್ಥ್ಯದ ಸಂಖ್ಯೆಯು ಧನ(+) ಚಿಹ್ನೆಯಾದರೆ ಪೀನ ಮಸೂರವೆಂದೂ, ಋಣ(−) ಚಿಹ್ನೆಯಾಗಿದ್ದರೆ ನಿಮ್ನ ಮಸೂರದ ಸಾಮರ್ಥ್ಯವೆಂದೂ ಅರ್ಥೈಸಬೇಕು.

**21. ಒಂದು ಸಮತಲ ದರ್ಪಣದಿಂದ ಸಾಮರ್ಥ್ಯವು +1 ಆಗಿದೆ. ಇದರ ಅರ್ಥವೇನು?**
ಇದರ ಅರ್ಥ ಪ್ರತಿಬಿಂಬದ ಗಾತ್ರವು ವಸ್ತುವಿನ ಗಾತ್ರದಷ್ಟೇ ಇದ್ದು, ನೇರ ಮತ್ತು ಮಿಥ್ಯ(ತಲೆಕೆಳಗಾದ) ಪ್ರತಿಬಿಂಬವಾಗಿದೆ.

********************